SRI DEVARAJ URS ACADEMY OF HIGHER EDUCATION & RESEARCH
SRI DEVARAJ URS MEDICAL COLLEGE
Tamaka, Kolar

SDUAHER

UNIVERSITY LIBRARY & LEARNING RESOURCE CENTRE

Online Newspaper Clipping Service
**Dated, Monday, 24th April – 2017**

ಸಂಯುಕ್ತ ಕರ್ನಾಟಕ

**Pg.No.09**

# 5 ವರ್ಷದಲ್ಲಿ 12 ನೂತನ ವೈದ್ಯಕೀಯ ಕಾಲೇಜು ಸ್ಥಾಪನೆ

ಶಿವಮೊಗ್ಗ: ರಾಜ್ಯದ ಪ್ರತಿ ಜಿಲ್ಲೆಯಲ್ಲೂ ಒಂದು ಮೆಡಿಕಲ್ ಕಾಲೇಜು ಹಾಗೂ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಇರಬೇಕು ಎಂಬ ನಿಟ್ಟಿನಲ್ಲಿ ಕಳೆದ ಐದು ವರ್ಷದಲ್ಲಿ 12 ಹೊಸ ಮೆಡಿಕಲ್ ಕಾಲೇಜುಗಳನ್ನು ಸ್ಥಾಪಿಸಲಾಗಿದೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು.



ಶಿವಮೊಗ್ಗದ ಕುವೆಂಪು ರಂಗಮಂದಿರದಲ್ಲಿ ಖಾಸಗಿ ಆಸ್ಪತ್ರೆ ವೈದ್ಯರ ಸಂಘದ ವತಿಯಿಂದ ಆಯೋಜಿಸಿದ್ದ ರಾಜ್ಯದ ಖಾಸಗಿ ವೈದ್ಯರು ಮತ್ತು ಆಸ್ಪತ್ರೆಗಳ ರಾಜ್ಯಮಟ್ಟದ ಸಮ್ಮೇಳನಕ್ಕೆ ಚಾಲನೆ ನೀಡಿ ಮಾತನಾಡಿ, ನಾವು ಹಣಕಾಸು ಮಂತ್ರಿಯಾಗಿದ್ದ ವೇಳೆಯಲ್ಲಿ 7 ಹಾಗೂ ಕಳೆದ ಐದು ವರ್ಷಗಳಲ್ಲಿ 12 ಹೊಸ ವೈದ್ಯಕೀಯ ಕಾಲೇಜುಗಳನ್ನು ಸ್ಥಾಪಿಸಿದ್ದೇನೆ. ಶ್ರೀಮಂತರಲ್ಲದೆ, ಬಡ, ಗ್ರಾಮೀಣ ಪ್ರದೇಶದ ಮಕ್ಕಳಿಗೂ ವೈದ್ಯರಾಗುವ ಭಾಗ್ಯ ಸಿಗಲಿ ಎಂಬ ಉದ್ದೇಶದಿಂದ ಹೆಚ್ಚು ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನು ತೆರೆಯಲಾಗಿದೆ ಎಂದು ತಿಳಿಸಿದರು.

ಸರ್ಕಾರಿ ಆಸ್ಪತ್ರೆ ಹಾಗೂ ಖಾಸಗಿ ಆಸ್ಪತ್ರೆಗಳು ಸುಧಾರಣೆ ಆಗಬೇಕು. ಜಯದೇವ ಹೃದ್ರೋಗ ಆಸ್ಪತ್ರೆಯಲ್ಲಿ ಸಿಗುವ ಸೇವೆ ಚಿಕಿತ್ಸೆ, ಸೌಲಭ್ಯಗಳು ಕಿದ್ವಾಯಿ ಆಸ್ಪತ್ರೆಯಲ್ಲಿ ಏಕೆ ಸಿಗಲ್ಲ. ಜಯದೇವ ಆಸ್ಪತ್ರೆಯ ಡಾ. ಮಂಜುನಾಥ್ ಅವರ ಉತ್ತಮ ಆಡಳಿತದಿಂದಾಗಿ ಇಂದು ಆಸ್ಪತ್ರೆ ಖ್ಯಾತಿ ಪಡೆದಿದೆ. ಇದೇ ರೀತಿ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲೂ ಉತ್ತಮ ಚಿಕಿತ್ಸೆ ನೀಡಬೇಕು ಎಂದು ಹೇಳಿದರು.

ಕಂದಾಯ ಸಚಿವ ಕಾಗೋಡು ತಿಮ್ಮಪ್ಪ ಮಾತನಾಡಿ, ಮನುಷ್ಯ ಶ್ರೇಷ್ಠ ಪ್ರಾಣಿ. ಶ್ರೇಷ್ಠ ಪ್ರಾಣಿಯ ಆರೋಗ್ಯ ಕಾಪಾಡುವ ಶ್ರೇಷ್ಠ ಪ್ರಾಣಿ ವೈದ್ಯರು. ಮನುಷ್ಯನಿಗೆ ಬದುಕು ನೀಡುವ ಆಶ್ರಯದಾತರು. ಜನರ ಆರೋಗ್ಯ ರಕ್ಷಣೆಗೆ ಖಾಸಗಿ ಆಸ್ಪತ್ರೆಗಳು ಬೇಕು. ಕೇವಲ ಸರ್ಕಾರಿ ಆಸ್ಪತ್ರೆಗಳಿಂದಲೇ ಆರೋಗ್ಯ ಸೇವೆ ನೀಡಲು ಸಾಧ್ಯವಿಲ್ಲ. ಆದರೆ ಕೆಲ ಖಾಸಗಿ ಆಸ್ಪತ್ರೆಗಳಲ್ಲಿ ಮೂಲಭೂತ ಸೌಲಭ್ಯಗಳಿರುವುದಿಲ್ಲ. ಅಲ್ಲದೇ ಅರ್ಹತೆ ಇಲ್ಲದವರು ಔಷಧಿ ಮಾರಾಟ ಮಾಡುತ್ತಾರೆ ಎಂದರು.

ಖಾಸಗಿ ಆಸ್ಪತ್ರೆ ವೈದ್ಯರ ಸಂಘದ ಅಧ್ಯಕ್ಷ ಡಾ. ಮಲ್ಲೇಶ್ ಹುಲ್ಲುಮನಿ ಮಾತನಾಡಿ, ಸಮಾಜದಲ್ಲಿ ಖಾಸಗಿ ಆಸ್ಪತ್ರೆ ವೈದ್ಯರ ಬಗ್ಗೆ ವೃಥಾ ಆರೋಪ ಮಾಡಲಾಗುತ್ತಿದೆ. ಆಸ್ಪತ್ರೆಗಳನ್ನು ಹಣ ಮಾಡುವ ಸಂಸ್ಥೆಗಳೆಂದು ಬಿಂಬಿಸಲಾಗುತ್ತಿದೆ. ವೈದ್ಯರ ಆತ್ಮವಿಶ್ವಾಸ ಕುಗ್ಗಿಸುವ ಕೆಲಸ ನಡೆಯುತ್ತಿದೆ. ಸಮಾಜಮುಖಿ ಆಶಯಗಳೊಂದಿಗೆ ಖಾಸಗಿ ಆಸ್ಪತ್ರೆ ವೈದ್ಯರನ್ನು ಗುರುತಿಸಿ ಉತ್ತರದಾಯಿತ್ವ ಹೆಚ್ಚಿಸಬೇಕು. ಸರ್ಕಾರಿ ಮತ್ತು ಖಾಸಗಿ ಆಸ್ಪತ್ರೆಗಳ ನಡುವೆ ಕಂದಕ ಸೃಷ್ಟಿಸಬಾರದು. ಸುವರ್ಣ ಆರೋಗ್ಯ ಯೋಜನೆಯಡಿ 19 ಆಸ್ಪತ್ರೆಗಳನ್ನು ನಿಷೇಧಿಸಿರುವುದನ್ನು ಹಿಂದಕ್ಕೆ ಪಡೆಯಬೇಕು. ಖಾಸಗಿ ಆಸ್ಪತ್ರೆಗಳ ಮೇಲೆ ವಿನಾಃಕಾರಣ ನಿಯಂತ್ರಣ ಹೇರಬಾರದು ಎಂದು ಮುಖ್ಯಮಂತ್ರಿಗಳಿಗೆ ಮನವಿ ಮಾಡಿದರು.

## ಉತ್ಸಾಹ ಹೆಚ್ಚಾಗಿದೆ

ಪ್ರಸ್ತುತ ಜೀವನಶೈಲಿಯಲ್ಲಿ ರೋಗ ಯಾರನ್ನೂ ಬಿಡುತ್ತಿಲ್ಲ. ನಾವು ವೈದ್ಯರು ಹೇಳಿದ್ದನ್ನೆ ಪಾಲಿಸುತ್ತಿದ್ದೇವೆ. ಸಾಮಾನ್ಯವಾಗಿ 86 ವರ್ಷಕ್ಕೆ ನಡೆಯಲು ಕಷ್ಟಪಡುತ್ತಾರೆ. ಕಿವಿ ಕೇಳುವುದಿಲ್ಲ. ಆದರೆ, ನಮ್ಮ ಕಾಗೋಡು ತಿಮ್ಮಪ್ಪ 86ರ ವಯಸ್ಸಿನಲ್ಲೂ ಕ್ರಿಯಾಶೀಲರಾಗಿದ್ದಾರೆ. ಅದರಲ್ಲೂ ಮಂತ್ರಿಗಳಾದ ಮೇಲೆ ಇನ್ನೂ ಹೆಚ್ಚಿನ ಉತ್ಸಾಹ ಅವರಲ್ಲಿ ಕಾಣುತ್ತಿದೆ ಎಂದು ಮುಖ್ಯಮಂತ್ರಿಗಳು ಕಾಗೋಡು ತಿಮ್ಮಪ್ಪರನ್ನು ಕಿಚಾಯಿಸಿದರು.